ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH
ಪತ್ರಿಕಾ ತುಣುಕುಗಳು
PAPER CLIPPINGS
ಶಾಖೆ / ವಿಷಯ: DEPARTMENT / SUBJECT:
ಪತ್ರಿಕೆಯ ಹೆಸರು : NAME OF THE NEWS PAPER :
ದಿನಾಂಕ : DATE : 01/08/2019

# 'ಸುಪ್ರೀಂ' ಬಲ 34ಕ್ಕೆ ಏರಿಕೆಗೆ ಸಂಪುಟ ಅಸ್ತು

ಪ್ರ.ವಾ. 1-8-19

ನವದೆಹಲಿ (ಪಿಟಿಐ): ಸುಪ್ರೀಂ ಕೋರ್ಟ್ ನ್ಯಾಯಮೂರ್ತಿಗಳ ಸಂಖ್ಯೆಯನ್ನು 30ರಿಂದ 33ಕ್ಕೆ ಏರಿಸುವ ಪ್ರಸ್ತಾವಕ್ಕೆ ಕೇಂದ್ರ ಸಚಿವ ಸಂಪುಟ ಬುಧವಾರ ಒಪ್ಪಿಗೆ ನೀಡಿದೆ. ಮುಖ್ಯನ್ಯಾಯಮೂರ್ತಿ ಸೇರಿ ನ್ಯಾಯಮೂರ್ತಿಗಳ ಒಟ್ಟು ಸಂಖ್ಯೆ 34ಕ್ಕೆ ಏರಿಕೆಯಾಗಲಿದೆ.

ಸುಪ್ರೀಂ ಕೋರ್ಟ್‌ನಲ್ಲಿ ವಿಚಾರಣೆಗೆ ಬಾಕಿಯಿರುವ ಪ್ರಕರಣಗಳು ಹೆಚ್ಚುತ್ತಿರುವ ಸಮಯದಲ್ಲೇ ಸಂಪುಟ ಈ ನಿರ್ಧಾರ ತೆಗೆದುಕೊಂಡಿದೆ. ಸದ್ಯ ಸುಪ್ರೀಂ ಕೋರ್ಟ್‌ನಲ್ಲಿ 59,331 ಪ್ರಕರಣಗಳು ವಿಚಾರಣೆಗೆ ಬಾಕಿಯಿವೆ.

ಇದೇ ಅಧಿವೇಶನದಲ್ಲಿ ಮಸೂದೆ ಮಂಡನೆಯಾಗಲಿದ್ದು, ಸಂಸತ್ತು ಒಪ್ಪಿಗೆ ನೀಡಿದ ಬಳಿಕ ನ್ಯಾಯಮೂರ್ತಿಗಳ ಸಂಖ್ಯೆ ಹೆಚ್ಚಳವಾಗಲಿದೆ ಎಂದು ಕೇಂದ್ರ ಸಚಿವ ಪ್ರಕಾಶ್ ಜಾವಡೇಕರ್ ತಿಳಿಸಿದ್ದಾರೆ.



ನ್ಯಾಯಮೂರ್ತಿಗಳ ಸಂಖ್ಯೆ ಹೆಚ್ಚಿಸುವಂತೆ ಪ್ರಧಾನಿ ನರೇಂದ್ರ ಮೋದಿ ಅವರಿಗೆ ಮುಖ್ಯನ್ಯಾಯಮೂರ್ತಿ ರಂಜನ್ ಗೊಗೊಯಿ ಅವರು ಕಳೆದ ತಿಂಗಳು ಪತ್ರ ಬರೆದಿದ್ದರು. ನ್ಯಾಯಮೂರ್ತಿಗಳ ಕೊರತೆಯಿಂದಾಗಿ ಮಹತ್ವದ ಪ್ರಕರಣಗಳ ವಿಚಾರಣೆ ವಿಳಂಬವಾಗುತ್ತಿದೆ ಎಂದು ಅವರು ವಿವರಿಸಿದ್ದರು.

'18ರಷ್ಟಿದ್ದ ನ್ಯಾಯಮೂರ್ತಿಗಳ ಸಂಖ್ಯೆಯನ್ನು 26ಕ್ಕೆ ಏರಿಕೆ ಮಾಡಲಾಗಿತ್ತು. ಎರಡು ದಶಕದ ಹಿಂದೆ ಈ ಸಂಖ್ಯೆಯನ್ನು 31ಕ್ಕೆ ಹೆಚ್ಚಿಸಲಾಗಿತ್ತು. ಜನರಿಗೆ ನಿಗದಿತ ಸಮಯದಲ್ಲಿ ನ್ಯಾಯದಾನ ಮಾಡಲು ಸಾಧ್ಯವಾಗುವಂತೆ ನ್ಯಾಯಮೂರ್ತಿಗಳ ಸಂಖ್ಯೆಯನ್ನು ಹೆಚ್ಚಿಸುವ ಪ್ರಸ್ತಾವವನ್ನು ಆದ್ಯತೆಯ ಮೇರೆಗೆ ಪರಿಗಣಿಸಿ' ಎಂದು ಗೊಗೊಯಿ ಮನವಿ ಮಾಡಿದ್ದರು.

ಸುಪ್ರೀಂ ಕೋರ್ಟ್ ಕಾಯ್ದೆ –1956ಕ್ಕೆ (ನ್ಯಾಯಮೂರ್ತಿಗಳ ಸಂಖ್ಯೆ) 2009ರಲ್ಲಿ ಕೊನೆಯದಾಗಿ ತಿದ್ದುಪಡಿ ಮಾಡಲಾಗಿತ್ತು. ಆರಂಭದಲ್ಲಿ 10 ನ್ಯಾಯಮೂರ್ತಿಗಳಿದ್ದರು. ಬಳಿಕ ಈ ಸಂಖ್ಯೆ 13, 17, 25ಕ್ಕೆ ಕ್ರಮೇಣ ಏರಿಕೆಯಾಗಿತ್ತು.

**ಶೇ 10ರಷ್ಟು ಮೀಸಲಾತಿ:** ಜಮ್ಮು ಮತ್ತು ಕಾಶ್ಮೀರದ ಆರ್ಥಿಕವಾಗಿ ಹಿಂದುಳಿದವರಿಗೆ ಶಿಕ್ಷಣ ಹಾಗೂ ಉದ್ಯೋಗದಲ್ಲಿ ಶೇ 10ರಷ್ಟು ಮೀಸಲಾತಿ ನೀಡುವ ಪ್ರಸ್ತಾವಕ್ಕೆ ಸಂಪುಟ ಅನುಮೋದನೆ ನೀಡಿದೆ.

'ಜಮ್ಮು ಮತ್ತು ಕಾಶ್ಮೀರ ಮೀಸಲಾತಿ (ಎರಡನೇ ತಿದ್ದುಪಡಿ) ಮಸೂದೆ 2019'ಕ್ಕೆ ಒಪ್ಪಿಗೆ ಸಿಕ್ಕಿದೆ. ಈಗಿರುವ ಮೀಸಲಾತಿಯ ಜೊತೆಗೆ ಶಿಕ್ಷಣ ಸಂಸ್ಥೆಗಳು ಹಾಗೂ ಉದ್ಯೋಗದಲ್ಲಿ ಆರ್ಥಿಕವಾಗಿ ಹಿಂದುಳಿದ ಜನರಿಗೆ ಶೇ 10ರವರೆಗೆ ಮೀಸಲಾತಿಯ ಸವಲತ್ತು ಸಿಗಲಿದೆ.

**ಚಿಟ್ ಫಂಡ್ ಮಸೂದೆ:** ನೋಂದಾಯಿತ ಚಿಟ್‌ಫಂಡ್ ಉದ್ದಿಮೆಗಳ ಮೇಲಿನ ಹೊರೆ ಕಡಿಮೆಗೊಳಿಸುವ ಹಾಗೂ ಚಿಟ್‌ಫಂಡ್ ಬಳಕೆದಾರರ ಹಿತ ಕಾಯುವ ಚಿಟ್ ಫಂಡ್ಸ್ ತಿದ್ದುಪಡಿ ಮಸೂದೆ 2019ಕ್ಕೆ ಸಂಪುಟದ ಅಂಗೀಕಾರ ಸಿಕ್ಕಿದೆ.

ಚಿಟ್ ಫಂಡ್ ಉದ್ಯಮ ನಿಯಂತ್ರಣ ಮಸೂದೆಯನ್ನು 2018ರಲ್ಲಿ ಸರ್ಕಾರ ಮಂಡಿಸಿತ್ತು. ಆದರೆ ಮಸೂದೆಯನ್ನು ಸಂಸತ್ತಿನ ಪರಿಶೀಲನಾ ಸಮಿತಿಗೆ ಒಪ್ಪಿಸಲಾಗಿತ್ತು. ಚಂದಾದಾರರಿಗೆ ವಿಮಾ ರಕ್ಷಣೆ ನೀಡುವ ಅಂಶ ಅಳವಡಿಸಿಕೊಳ್ಳುವಂತೆ ಸಮಿತಿ ಸಲಹೆ ನೀಡಿತ್ತು.

## ಸಂಪುಟದ ಇತರೆ ನಿರ್ಣಯಗಳು

- ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆ ಇಸ್ರೊದ ತಾಂತ್ರಿಕ ಘಟಕವನ್ನು (ಐಟಿಎಲ್‌ಯು) ರಷ್ಯಾದ ಮಾಸ್ಕೊದಲ್ಲಿ ನಿರ್ಮಿಸಲು ಸಂಪುಟ ಅನುಮೋದನೆ ನೀಡಿದೆ. ಇಸ್ರೊ ಕಾರ್ಯಕ್ರಮಗಳಿಗೆ ರಷ್ಯಾ ಹಾಗೂ ನೆರೆಯ ದೇಶಗಳ ಸಹಕಾರ ಪಡೆಯಲು ಇದು ನೆರವಾಗಲಿದೆ. ಇದಕ್ಕೆ ವಾರ್ಷಿಕ ₹1.5 ಕೋಟಿ ವೆಚ್ಚವಾಗಲಿದೆ.
- ವಿದೇಶಿ ಹೂಡಿಕೆದಾರರಲ್ಲಿ ವಿಶ್ವಾಸ ತುಂಬುವ ಸಲುವಾಗಿ ವಿಶ್ವಸಂಸ್ಥೆಯ ಅಂತರರಾಷ್ಟ್ರೀಯ ವ್ಯಾಜ್ಯ ಪರಿಹಾರ ಒಪ್ಪಂದಕ್ಕೆ (ಯುಎನ್‌ಐಎಸ್‌ಎ) ಸಹಿ ಹಾಕಲು ಸಂಪುಟ ಒಪ್ಪಿಗೆ ನೀಡಿದೆ. ಸಿಂಗಪುರ ಅಥವಾ ವಿಶ್ವಸಂಸ್ಥೆ ಕೇಂದ್ರ ಕಚೇರಿಯಲ್ಲಿ ಆಗಸ್ಟ್ 7ರಂದು ಒಪ್ಪಂದಕ್ಕೆ ಸಹಿ ಹಾಕುವ ಸಾಧ್ಯತೆಯಿದೆ. ವ್ಯಾಜ್ಯ ಪರಿಹಾರದಲ್ಲಿ ಭಾರತದ ಬದ್ಧತೆಯನ್ನು ವಿವರಿಸಲು ಈ ಒಪ್ಪಂದ ನೆರವಿಗೆ ಬರಲಿದೆ.

10